ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ನವೆಂಬರ್ 17, 2015

**ಶಾಸಕ ಗುರುಪಾದಪ್ಪ ನಾಗಮಾರಪಲ್ಲಿ ಅವರ ನಿಧನಕ್ಕೆ**
**ಮುಖ್ಯಮಂತ್ರಿ ಸಂತಾಪ**

**ಬೆಂಗಳೂರು, ನವೆಂಬರ್ 17:**

ಶಾಸಕ ಹಾಗೂ ಮಾಜಿ ಸಚಿವ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಸಹಕಾರಿ ಕ್ಷೇತ್ರದ ಧುರೀಣರೂ ಆಗಿದ್ದ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರು ಮೊದಲು 1985 ರಿಂದ 2007 ರವರೆಗೆ ಬೀದರ್ ಜಿಲ್ಲೆಯ ಔರಾದ್ ಕ್ಷೇತ್ರದಲ್ಲಿ ಹಾಗೂ ನಂತರ 2008 ಹಾಗೂ 2013 ರಲ್ಲಿ ಬೀದರ್ ಕ್ಷೇತ್ರದಿಂದ ರಾಜ್ಯ ವಿಧಾನ ಸಭೆಗೆ ಆಯ್ಕೆಯಾಗಿದ್ದಾರೆ. ಬಂಧೀಖಾನೆ ಸಚಿವರಾಗಿ ಹಾಗೂ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರಾಗಿಯೂ ಸೇವೆ ಸಲ್ಲಿಸಿರುವ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರು ಸ್ನೇಹ ಜೀವಿ. ಚುನಾವಣೆಗಳಲ್ಲಿ ತಾವು ಪ್ರತಿನಿಧಿಸಿದ ಪಕ್ಷದ ಪ್ರಭಾವಕ್ಕಿಂತಲೂ ತಮ್ಮ ಸ್ವಯಂ ವರ್ಚಸ್ಸಿನಿಂದಲೇ ಗೆದ್ದವರು ಎಂಬುದೇ ಹೆಗ್ಗಳಿಕೆ.

ಇತ್ತೀಚೆಗಷ್ಟೇ ನವೆಂಬರ್ 11 ರಂದು ಬೀದರ್‌ನಲ್ಲಿ ತಮ್ಮ ಅಭಿಮಾನಿಗಳ ಸಮ್ಮುಖದಲ್ಲಿ ತಮ್ಮ 74 ನೇ ಹುಟ್ಟು ಹಬ್ಬವನ್ನು ಅತ್ಯಂತ ಅದ್ದೂರಿಯಿಂದ ಆಚರಿಸಿಕೊಂಡ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರು ಐದು ದಿನಗಳ ನಂತರ ನಮ್ಮೊಂದಿಗಿಲ್ಲ ಎಂಬುದನ್ನು ನಂಬಲು ಸಾಧ್ಯವಾಗುತ್ತಿಲ್ಲ. ಸಹಕಾರಿ ಕ್ಷೇತ್ರದ ಧುರೀಣ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರು ಸಹಕಾರಿ ಸಪ್ತಾಹದ ನಡುವೆಯೇ ನಮ್ಮನ್ನು ಅಗಲಿರುವುದು ಅಚ್ಚರಿ ಹಾಗೂ ಕಾಕತಾಳೀಯ ಕೂಡಾ ಎಂದು ಶ್ರೀ ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ನಮ್ಮನ್ನಗಲಿರುವ ಈ ಹಿರಿಯ ಚೇತನ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಹಾಗೂ ಶ್ರೀಯುತರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸಲು ಅವರ ಕುಟುಂಬದ ಸದಸ್ಯರು ಮತ್ತು ಅಪಾರ ಅಭಿಮಾನಿ ವರ್ಗಕ್ಕೆ ಶಕ್ತಿಯನ್ನು ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

**ಅಂತಿಮ ನಮನ**

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ನಗರದ ವಿಕ್ರಂ ಆಸ್ಪತ್ರೆಗೆ ಭೇಟಿ ನೀಡಿ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರ ಪಾರ್ಥಿವ ಶರೀರದ ದರ್ಶನ ಪಡೆದು ಅಂತಿಮ ನಮನ ಸಲ್ಲಿಸಿದರು.

*********